# Akashvani : Bangalore
# National Bulletin In Kannada
# 12.03.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><*<><>*><>

ಮುಖ್ಯಾಂಶಗಳು

೧. ಭಾರತ ಜಗತ್ತಿನ ಮೂರನೇ ಅತಿ ದೊಡ್ಡ ಆರ್ಥಿಕತೆಯತ್ತ- ರಾಷ್ಟ್ರಪತಿ ದ್ರೌಪದಿ ಮುರ್ಮು

೨. ದೇಶದ ರೈಲ್ವೆ ಸೇವೆ ಉತ್ತಮಪಡಿಸುವ ೮೫ ಸಾವಿರ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಮಂತ್ರಿ ನರೇಂದ್ರ ಅವರಿಂದ ಶಂಕುಸ್ಥಾಪನೆ- ಲೋಕಾರ್ಪಣೆ

೩. ಅಭಿವೃದ್ಧಿ ಹೊಂದಿದ ದೇಶವಾಗಿ ಹೊರಹೊಮ್ಮಲು ಸ್ವಾವಲಂಬನೆಯ ಸಾಧನೆ ಅತ್ಯಗತ್ಯ- ಪ್ರಧಾನಿ

೪. ಸಿಂಗ್‌ಪುರ್ ಸ್ಮ್ಯಾಷ್ ಟೇಬಲ್ ಟೆನಿಸ್ ಪಂದ್ಯಾವಳಿ: ಭಾರತದ ಅಚಂತ್ ಶರತ್ ಕಮಲ್ ಪ್ರೀ ಕ್ವಾರ್ಟರ್ ಫೈನಲ್ಸ್‌ಗೆ

<><*<><>*><>

ಭಾರತ ಜಗತ್ತಿನ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮುವತ್ತ ಸಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಅವರು, ಮಾರಿಷಿಯಸ್‌ನಲ್ಲಿಂದು ಮಹಾತ್ಮಾಗಾಂಧಿ ಮತ್ತು ರವೀಂದ್ರನಾಥ್ ಠಾಗೂರ್ ಸಂಸ್ಥೆಗಳಲ್ಲಿ ಭಾರತೀಯ ಸಂಜಾತರನ್ನುದ್ದೇಶಿಸಿ ಮಾತನಾಡಿ, ಮಾರಿಷಿಯಸ್‌ನ ಆರ್ಥಿಕ ಸಮೃದ್ಧಿಗಾಗಿ ಶ್ರಮಿಸುತ್ತಿರುವ ಭಾರತೀಯ ಮೂಲದ ಜನರ ಕೊಡುಗೆಯನ್ನು ಶ್ಲಾಘಿಸಿದರು. ಇದಕ್ಕೂ ಮುನ್ನ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಮಾರಿಷಿಯಸ್ ವಿಶ್ವವಿದ್ಯಾಲಯದಲ್ಲಿ ಡಾಕ್ಟರ್ ಆಫ್ ಸಿವಿಲ್ ಲಾ ಪದವಿಯನ್ನು ಪ್ರದಾನ ಮಾಡಲಾಯಿತು. ಈ ಸಂದರ್ಭದಲ್ಲಿ ಅವರು ಮಾತನಾಡಿ, ಯುವಜನತೆಗೆ ಶಿಕ್ಷಣ ಒದಗಿಸುವ ಮೂಲಕ ಭಾರತವನ್ನು ಜ್ಞಾನ ಆರ್ಥಿಕತೆಯನ್ನಾಗಿಸಲು ಆದ್ಯತೆ ನೀಡಲಾಗುತ್ತಿದೆ. ಗ್ರಾಮೀಣ ಭಾಗದಲ್ಲಿ ಹೊಸ ಕಾಲೇಜು, ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗುತ್ತಿದೆ. ಕಳೆದ ಒಂದು ದಶಕದಲ್ಲಿ ೪೦೦ ಹೊಸ ವಿಶ್ವವಿದ್ಯಾಲಯ, ೭೫ ಪ್ರಮುಖ ಶಿಕ್ಷಣ ಸಂಸ್ಥೆ, ೧೪ ಹೊಸ ಏಮ್ಸ್, ೭

ಐಐಟಿ ಮತ್ತು ಐಐಎಂ ಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಮಾರಿಷಿಯಸ್ ರಾಷ್ಟ್ರೀಯ ದಿನಾಚರಣೆ ಕಾರ್ಯಕ್ರಮದಲ್ಲಿಂದು ಮುಖ್ಯ ಅತಿಥಿಯಾಗಿ ಪಾಲ್ಗೊಂಡರು. ಮಾರಿಷಿಯಸ್‌ನ ಶ್ರೀಮಂತ ಪರಂಪರೆಯನ್ನು ಸಾರುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ, ಸ್ತಬ್ಧಚಿತ್ರ ಪ್ರದರ್ಶನ, ರಕ್ಷಣಾಪಡೆಗಳ ಗೌರವ ಪ್ರದರ್ಶನ ಏರ್ಪಡಿಸಲಾಗಿತ್ತು. ಭಾರತೀಯ ನೌಕಾಪಡೆಯ ಹೆಲಿಕಾಪ್ಟರ್‌ಗಳೂ ಕೂಡ ಮಾರ್ಚ್‌ಫಾಸ್ಟ್‌ನಲ್ಲಿ ಪಾಲ್ಗೊಂಡಿದ್ದವು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಮಾರಿಷಿಯಸ್ ರಾಷ್ಟ್ರೀಯ ದಿನದ ಸಂದರ್ಭದಲ್ಲಿ ಅಲ್ಲಿನ ಜನತೆಗೆ ಹಾರ್ದಿಕ ಶುಭಾಶಯ ಕೋರಿದರು. ಸಮಾರಂಭದಲ್ಲಿ ಮಾರಿಷಿಯಸ್ ಅಧ್ಯಕ್ಷ ಪೃಥ್ವಿರಾಜ್ ಸಿಂಗ್ ರೂಪನ್, ಪ್ರಧಾನಮಂತ್ರಿ ಪ್ರವೀಂದ್‌ಕುಮಾರ್ ಜುಗ್ನಾಥ್ ಉಪಸ್ಥಿತರಿದ್ದರು.

<><*<><>*><>

ಪ್ರಧಾನ ಮಂತ್ರಿ ನರೇಂದ್ರ ಮೋದಿ, ಅಹಮದಾಬಾದ್‌ನಲ್ಲಿಂದು ೮೫ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ದೇಶದ ವಿವಿಧ ರೈಲ್ವೇ ಯೋಜನೆಗಳ ಶಂಕುಸ್ಥಾಪನೆ ನೆರವೇರಿಸಿದರು ಮತ್ತು ಕೆಲವು ಯೋಜನೆಗಳನ್ನು ಲೋಕಾರ್ಪಣೆಗೊಳಿಸಿದರು. ಅಹಮದಾಬಾದ್-ಮುಂಬೈ ಸೆಂಟ್ರಲ್, ಸಿಕಂದರಾಬಾದ್-ವಿಶಾಖಪಟ್ಟಣಂ, ಮೈಸೂರು- ಡಾ. ಎಂಜಿಆರ್ ಸೆಂಟ್ರಲ್ (ಚೆನ್ನೈ), ಪಾಟ್ನಾ- ಲಕ್ನೋ, ನ್ಯೂ ಜಲ್ಪೈಗುರಿ-ಪಾಟ್ನಾ, ಪುರಿ-ವಿಶಾಖಪಟ್ಟಣಂ, ಲಖನೌ-ಡೆಹ್ರಾಡೂನ್, ಕಲಬುರಗಿ ಸೇರಿದಂತೆ ೧೦ಹೊಸ ವಂದೇ ಭಾರತ್ ರೈಲುಗಳಿಗೆ ಪ್ರಧಾನಿ ಚಾಲನೆ ನೀಡಿದರು. ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು, ರಾಂಚಿ-ವಾರಣಾಸಿ, ಖಜುರಾಹೊ-ದೆಹಲಿ (ನಿಜಾಮುದ್ದೀನ್). ಅಹಮದಾಬಾದ್-ಜಾಮ್‌ನಗರ ವಂದೇ ಭಾರತ್ ಸೇರಿದಂತೆ ಅಸ್ತಿತ್ವದಲ್ಲಿರುವ ನಾಲ್ಕು ವಂದೇ ಭಾರತ್ ರೈಲುಗಳ ವಿಸ್ತರಣೆಗೆ ಮೋದಿ ಅವರು ಹಸಿರು ನಿಶಾನೆ ತೋರಿದರು.

ಧ್ವನಿ: ಪ್ರಧಾನಿ

ಫಾಲ್ಟಾನ್ - ಬಾರಾಮತಿ ಹೊಸ ರೈಲು ಮಾರ್ಗ ಮತ್ತು ಮೀಸಲಾದ ಸರಕು ಸಾಗಣೆ ಕಾರಿಡಾರ್‌ನ ಎರಡು ವಿಭಾಗಗಳನ್ನು, ೫೧ ಗತಿ ಶಕ್ತಿ ಮಲ್ಟಿ-ಮೋಡಲ್ ಕಾರ್ಗೋ ಟರ್ಮಿನಲ್‌ಗಳು, ಒಂದು ನಿಲ್ದಾಣ ಒಂದು ಉತ್ಪನ್ನ ಸ್ಟಾಲ್‌ಗಳನ್ನು ದೇಶಕ್ಕೆ ಸಮರ್ಪಿಸಿದರು. ದೇಶಾದ್ಯಂತ ವಿವಿಧ ಸ್ಥಳಗಳಿಂದ ಮೀಸಲಾದ ಸರಕು ಸಾಗಣೆ ಕಾರಿಡಾರ್‌ನಲ್ಲಿ ಸರಕು ಸಾಗಣೆ ರೈಲುಗಳಿಗೆ ಚಾಲನೆ ನೀಡಿದರು. ಪ್ರಧಾನಮಂತ್ರಿಯವರು ಭಾಗವಹಿಸಿದ್ದ ವರ್ಚುವಲ್ ಕಾರ್ಯಕ್ರಮದಲ್ಲಿ ಕರ್ನಾಟಕದ

ರಾಜ್ಯಪಾಲ ಥಾವರ್‌ಚೆಂದ್ ಗೆಹ್ಲೋಟ್, ಹುಬ್ಬಳ್ಳಿ ರೈಲ್ವೆ ನಿಲ್ದಾಣದಿಂದ ಪಾಲ್ಗೊಂಡರು. ಈ ಸಂದರ್ಭದಲ್ಲಿ ಅವರು ಮಾತನಾಡಿ, ಪ್ರಸ್ತುತ ರಾಜ್ಯದಲ್ಲಿ ೫ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಓಡುತ್ತಿವೆ. ರಾಜ್ಯಕ್ಕೆ ಇಂದು ಮತ್ತೊಂದು ವಂದೇ ಭಾರತ್ ರೈಲು ಉಡುಗೊರೆಯಾಗಿ ದೊರೆತಿದೆ. ರಾಜ್ಯದ ಮೊದಲ ಅಮೃತ್ ಭಾರತ್ ಎಕ್ಸ್‌ಪ್ರೆಸ್ ನ್ನು ಮಾಲ್ಡಾಟೌನ್-ಸರ್.ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ನಡುವೆ ಆರಂಭಿಸಲಾಗಿದೆ. ಸರ್.ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಸ್ಟೇಷನ್ ದೇಶದಲ್ಲೇ ಮೊದಲ ಹವಾನಿಯಂತ್ರಿತ ರೈಲ್ವೆ ನಿಲ್ದಾಣವಾಗಿದ್ದು, ವಿಮಾನ ನಿಲ್ದಾಣದಂತಹ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗಿದೆ ಎಂದು ಅವರು ಹೇಳಿದರು. ರಾಜ್ಯದಲ್ಲಿ ೩೧ ರೈಲ್ವೆ ನಿಲ್ದಾಣಗಳ ಪುನರಾಭಿವೃದ್ಧಿಗೆ ಸಿದ್ಧತೆ ನಡೆಯುತ್ತಿದೆ. ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ೩೩೦ ಕೋಟಿ ೬೨ ಲಕ್ಷ ರೂಪಾಯಿ ವೆಚ್ಚದಲ್ಲಿ ೧೪ ಮೇಲ್ಸೇತುವೆ ಮತ್ತು ಕೆಳಸೇತುವೆ ರಸ್ತೆಗಳನ್ನು ನಿರ್ಮಿಸಲಾಗುವುದು ಎಂದು ರಾಜ್ಯಪಾಲರು ಮಾಹಿತಿ ನೀಡಿದರು. "ಒಂದು ನಿಲ್ದಾಣ, ಒಂದು ಉತ್ಪನ್ನ" ಮಳಿಗೆಗೂ ವಿಡೀಯೋ ಸಂವಾದ ಮೂಲಕ ಚಾಲನೆ ನೀಡಿದರು. ಸ್ಥಳೀಯ ಮಾರುಕಟ್ಟೆಯ ಉತ್ಪನ್ನಗಳಿಗೆ ಉತ್ತೇಜನ ನೀಡಲು ಬಳ್ಳಾರಿಯ ರೈಲ್ವೆ ನಿಲ್ದಾಣದಲ್ಲಿನ ಈ ಮಳಿಗೆಯನ್ನು ತೆರೆಯಲಾಗಿದೆ. ಈ ಮಳಿಗೆಯಲ್ಲಿ ಸಂಡೂರು ಕರ ಕುಶಲ ಕೇಂದ್ರದ ಲಂಬಾಣಿ ಕಸೂತಿ ಕಲೆಯ ಉತ್ಪನ್ನಗಳ ಮಾರಾಟ ಆರಂಭವಾಗಿದೆ. ಬಾಗಲಕೋಟೆ-ಗದಗ ಜೋಡಿ ಮಾರ್ಗ ಹಾಗೂ ಬಾಗಲಕೋಟೆ ರೈಲು ನಿಲ್ದಾಣದಲ್ಲಿ ಒಂದು ನಿಲ್ದಾಣ ಒಂದು ಉತ್ಪನ್ನ ಮಳಿಗೆಯನ್ನು ಕೂಡ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಲೋಕಾರ್ಪಣೆಗೊಳಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಪಿ.ಸಿ.ಗದ್ದಿಗೌಡರ್ ವ್ಯಾಪಾರ ವಹಿವಾಟು ಹಾಗೂ ಜನರ ಪ್ರಯಾಣಕ್ಕಾಗಿ ಸುಸಜ್ಜಿತ ಹಾಗೂ ಸಮರ್ಪಕ ರೈಲು ಸಾರಿಗೆಯಿಂದ ದೇಶ ಪ್ರಗತಿ ಹೊಂದಲು ಸಾಧ. ಪ್ರಧಾನಮಂತ್ರಿಗಳ ಅನುಭವ, ಕಲ್ಪನೆ, ನಿರ್ಣಯ ಹಾಗೂ ನಿರಂತರ ಪ್ರಯತ್ನದಿಂದಾಗಿ ದೇಶ ವಿಶ್ವಕ್ಕೆ ಮಾದರಿಯಾಗಿದೆ ಎಂದರು. ೯೫೦ ಕೋಟಿ ರೂಪಾಯಿ ವೆಚ್ಚದಲ್ಲಿ ಗದಗ-ಬಾಗಲಕೋಟೆ ಜೋಡಿ ಮಾರ್ಗಕ್ಕೆ ಚಾಲನೆ ದೊರೆತಿದ್ದು, ಅದರಲ್ಲಿ ಎರಡು ದೊಡ್ಡ ಸೇತುವೆಗಳು, ೪೨ ಚಿಕ್ಕ ಸೇತುವೆಗಳು ಸೇರಿವೆ ಎಂದರು. ಬಾಗಲಕೋಟೆ ರೈಲ್ವೆ ನಿಲ್ದಾಣದಲ್ಲಿ, ಒಂದು ನಿಲ್ದಾಣ ಒಂದು ಉತ್ಪನ್ನ ಯೋಜನೆಯಡಿಯಲ್ಲಿ, ಜಿಲ್ಲೆಯ ಪ್ರಸಿದ್ಧ ಇಳಕಲ್ ಸೀರೆಗಳ ಮಾರಾಟ ಮಳಿಗೆ ಪ್ರಾರಂಭಿಸಲಾಗಿದೆ. ಇಂತಹ ಮಳಿಗೆಯಿಂದ ಸ್ಥಳೀಯ ಕುಶಲ ಕರ್ಮಿಗಳಿಗೆ ಉತ್ತೇಜನ ದೊರೆಯುತ್ತದೆ ಎಂದು ಹೇಳಿದರು.

<><*<><>*><>

ಅಭಿವೃದ್ಧಿ ಹೊಂದಿದ ದೇಶವಾಗಿ ಹೊರಹೊಮ್ಮಲು ಸ್ವಾವಲಂಬನೆ ಸಾಧಿಸುವುದು ಅತ್ಯಗತ್ಯ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ರಾಜಸ್ತಾನದ ಪೋಖ್ರಾನ್‌ನಲ್ಲಿ ದೇಶೀಯವಾಗಿ ನಿರ್ಮಿಸಲಾದ ರಕ್ಷಣಾ ಉಪಕರಣ ಪ್ರದರ್ಶನ- ಭಾರತ ಶಕ್ತಿ ವೀಕ್ಷಿಸಿದ ಬಳಿಕ, ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಖಾದ್ಯ ತೈಲದಿಂದ ಹಿಡಿದು ಅತ್ಯಾಧುನಿಕ ಯುದ್ಧ ವಿಮಾನ ನೌಕೆವರೆಗೆ ಪ್ರತಿ ಕ್ಷೇತ್ರದಲ್ಲಿ ಸ್ವಾವಲಂಬನೆಗೆ ಒತ್ತು ನೀಡಲಾಗುತ್ತಿದೆ. ದೇಶದ ರಕ್ಷಣಾ ಪಡೆಯ ಮೂರೂ ಸೇವೆಗಳ ಸೈನಿಕರು ಭಾರತದಲ್ಲೇ ತಯಾರಾದ ಆಧುನಿಕ ಉಪಕರಣಗಳನ್ನು ಮತ್ತು ಶಸ್ತ್ರಾಸ್ತ್ರಗಳನ್ನು ಬಳಸುತ್ತಿರುವುದು, ದೇಶದ ಶಕ್ತಿಯ ಪ್ರದರ್ಶನವಾಗಿದೆ ಎಂದರು. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಲು ಕೇಂದ್ರ ಸರ್ಕಾರ, ಕಳೆದ ಹತ್ತು ವರ್ಷಗಳಲ್ಲಿ ಅನೇಕ ಬೃಹತ್ ಉಪಕ್ರಮಗಳನ್ನು ಕೈಗೊಂಡಿದೆ. ನೀತಿ ಮಟ್ಟದಲ್ಲೂ ಸುಧಾರಣೆ ತರಲಾಗಿದ್ದು, ಖಾಸಗೀ ವಲಯವನ್ನು ಸೇರಿಸಿಕೊಳ್ಳಲಾಗಿದೆ. ಉತ್ತರಪ್ರದೇಶ ಮತ್ತು ತಮಿಳುನಾಡಿನಲ್ಲಿ ರಕ್ಷಣಾ ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಇದುವರೆಗೆ ಇವುಗಳಿಗಾಗಿ ಸುಮಾರು ೭ ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಏಷ್ಯಾದ ಅತಿ ದೊಡ್ಡ ಹೆಲಿಕಾಪ್ಟರ್ ತಯಾರಿಕಾ ಕಂಪನಿ ಭಾರತದಲ್ಲಿ ತನ್ನ ಕಾರ್ಯಾಚರಣೆ ಆರಂಭಿಸಿದೆ ಎಂದು ಪ್ರಧಾನಿ ಹೇಳಿದರು. ಕಳೆದ ಹತ್ತು ವರ್ಷಗಳಲ್ಲಿ ದೇಶೀಯ ಕಂಪನಿಗಳಿಂದ ಸುಮಾರು ೬ ಲಕ್ಷ ಕೋಟಿ ರೂಪಾಯಿ ಮೊತ್ತದ ರಕ್ಷಣಾ ಉಪಕರಣಗಳನ್ನು ಖರೀದಿಸಲಾಗಿದೆ. ಈ ಅವಧಿಯಲ್ಲಿ ರಕ್ಷಣಾ ಉತ್ಪನ್ನಗಳ ಪ್ರಮಾಣ ದ್ವಿಗುಣಗೊಂಡಿದ್ದು, ಅದು ಒಂದು ಲಕ್ಷ ಕೋಟಿ ರೂಪಾಯಿ ಸಮೀಪಿಸಿದೆ. ೧೫೦ಕ್ಕೂ ಹೆಚ್ಚು ನವೋದ್ಯಮಗಳು ರಕ್ಷಣಾ ಉತ್ಪನ್ನಗಳ ಬೇಡಿಕೆಯನ್ನು ಯಶಸ್ವಿಯಾಗಿ ಪೂರೈಸುತ್ತಿದೆ ಎಂದು ಪ್ರಧಾನಮಂತ್ರಿ ಹೇಳಿದರು. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಾಜಸ್ತಾನದ ಮುಖ್ಯಮಂತ್ರಿ ಭಜನ್ ಲಾಲ್, ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಶೇಕಾವತ್, ಸಿಡಿಸಿ ಜನರಲ್ ಅನಿಲ್ ಚೌಹಾಣ್ ಹಾಗೂ ರಕ್ಷಣಾಪಡೆಯ ಮೂವರೂ ಮುಖ್ಯಸ್ಥರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><*<><>*><>

ಪ್ರಧಾನಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳ ಸಂಖ್ಯೆ ಹೆಚ್ಚಿಸಲು ನೆರವಾಗುವ ಉದ್ದೇಶದಿಂದ ಸಣ್ಣ ಉದ್ದಿಮೆದಾರರಿಗೆ ಸಾಲ ನೀಡುವ ಉದ್ದೇಶದ ಕಾರ್ಯಕ್ರಮವನ್ನು ಕೇಂದ್ರ ಆರೋಗ್ಯ ಖಾತೆ ಸಚಿವ ಡಾ.ಮನ್ಸೂಖ್ ಮಾಂಡವಿಯ ದೆಹಲಿಯಲ್ಲಿಂದು ಉದ್ಘಾಟಿಸಿದರು. ಈ ಯೋಜನೆಯಡಿ ಭಾರತದ ಸಣ್ಣ ಕೈಗಾರಿಕೆ ಅಭಿವೃದ್ಧಿ ಬ್ಯಾಂಕ್ ಯಾವುದೇ ಭೌತಿಕ ಗ್ಯಾರಂಟಿ ಇಲ್ಲದೇ, ಕಡಿಮೆ ಬಡ್ಡಿದರದಲ್ಲಿ ಸಾಲವನ್ನು ಒದಗಿಸುತ್ತದೆ.

<><*<><>*><>

ವಿದ್ಯಾರ್ಥಿಗಳು ಮತ್ತು ಸಂಶೋಧನಾರ್ಥಿಗಳಿಗೆ ನೆರವಾಗುವ ಸಾಮಾನ್ಯ ಫೆಲೋಶಿಪ್ ಪೋರ್ಟಲ್‌ಗೆ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಡಾ.ಜಿತೇಂದ್ರ ಸಿಂಗ್ ದೆಹಲಿಯಲ್ಲಿಂದು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಸಚಿವರು, ಈ ಪೋರ್ಟಲ್ ಮೂಲಕ ವಿದ್ಯಾರ್ಥಿಗಳು ವಿವಿಧ ಇಲಾಖೆಗಳ ವಿದ್ಯಾರ್ಥಿ ವೇತನ-ಫೆಲೋಶಿಪ್ ಬಗ್ಗೆ ಒಂದೆಡೆ ಮಾಹಿತಿ ಪಡೆಯಲು ಅನುಕೂಲವಾಗುತ್ತದೆ ಎಂದರು.

<><*<><>*><>

ಕೇಂದ್ರ ಕ್ರೀಡೆ ಮತ್ತು ಯುವಜನ ವ್ಯವಹಾರಗಳ ಖಾತೆ ಸಚಿವ ಅನುರಾಗ್ ಸಿಂಗ್ ಠಾಕೂರ್ ಅವರು, ಪ್ರತಿಭಾನ್ವಿತ ಆಟಗಾರರನ್ನು ಗುರುತಿಸುವ ಖೇಲೋ ಇಂಡಿಯಾ ಕೀರ್ತಿ ಕಾರ್ಯಕ್ರಮಕ್ಕೆ ಚಂಡೀಗಢದಲ್ಲಿಂದು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಯೋಜನೆಯಿಂದ  ಪ್ರತಿಭಾವಂತ ಯುವ ಆಟಗಾರರನ್ನು ತಳಮಟ್ಟದಿಂದಲೇ ಗುರುತಿಸಲು ಸಾಧ್ಯವಾಗುತ್ತದೆ ಎಂದರು. ಸಚಿವರು, ಇದೇ ಸಂದರ್ಭದಲ್ಲಿ ಮಹಿಳಾ ಕ್ರೀಡಾಪಟುಗಳಿಗಾಗಿಯೇ ಮೀಸಲಾದ ಎರಡು ನೂತನ ರಾಷ್ಟ್ರೀಯ ಕ್ರೀಡಾ ಶ್ರೇಷ್ಠತಾ ತರಬೇತಿ ಕೇಂದ್ರಗಳ ಸ್ಥಾಪನೆಯನ್ನು ಪ್ರಕಟಿಸಿದರು.

<><*<><>*><>

ಸಿಂಗ್‌ಪುರ್ ಸ್ಮ್ಯಾಷ್ ಟೇಬಿಲ್ ಟೆನಿಸ್ ಪಂದ್ಯಾವಳಿಯ ಪುರಷರ ಸಿಂಗಲ್ಸ್‌ನಲ್ಲಿ ಭಾರತದ ಅಚಂತ್ ಶರತ್ ಕಮಲ್, ಪ್ರೀ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.  ಅವರು, ಚಿಲಿಯ ನಿಕೋಲಸ್ ಬರ್ಗೋಸ್ ಅವರನ್ನು ೩-೦ ಅಂತರದಿಂದ ಪರಾಭವಗೊಳಿಸಿದರು. ಅಚಂತ್ ಶರತ್ ಪ್ರೀ ಕ್ವಾರ್ಟರ್ ಫೈನಲ್ಸ್‌ನಲ್ಲಿ ಸ್ಲೋವೇನಿಯಾದ ಡಾರ್ಕೋ ಜೋರ್ಗ್ವಿಕ್ ಅವರನ್ನು ಎದುರಿಸಲಿದ್ದಾರೆ. ಮಹಿಳೆಯರ ಡಬಲ್ಸ್‌ನಲ್ಲಿ ಸುತೀರ್ಥ ಮತ್ತು ಐಹಿಕ ಮುಖರ್ಜಿ ಸಹೋದರಿಯರು ಜಪಾನಿನ ಮಿಯೊ ಹಿರಾನೊ ಮತ್ತು ಮಿವಾ ಹರಿಮೊತೊ ಜೋಡಿಯನ್ನು ೩-೨ ಅಂತರದಿಂದ ಪರಾಭಗೊಳಿಸಿ, ೧೬ ಸುತ್ತನ್ನು ಪ್ರವೇಶಿಸಿದ್ದಾರೆ.